ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು- 570005

ದಿನಾಂಕ: 07.05.2026

ಸಂಖ್ಯೆ: ಎಸಿ4/01/2026-27

# ಅಧಿಸೂಚನೆ

ವಿಷಯ: 2026-27ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿ ಪ್ರೋಗ್ರಾಂಗಳ ಪ್ರವೇಶಾತಿ ಬಗ್ಗೆ.

ಉಲ್ಲೇಖ: 1. ವಿ.ವಿ. ಅಧಿಸೂಚನೆ ದಿನಾಂಕ 09-04-2026 ಮತ್ತು 21-04-2026.
2. ವಿ.ವಿ. ಅಧಿಸೂಚನೆ ಸಂಖ್ಯೆ: ಎಸಿ2(ಎಸ್)/225/2026-27, ದಿನಾಂಕ 09-04-2026.
3. ಮಾನ್ಯ ಕುಲಪತಿಯವರ ಆದೇಶ ದಿನಾಂಕ 07-05-2026

*****

ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ಉಲ್ಲೇಖ (1)ರ ಅಧಿಸೂಚನೆಯಲ್ಲಿ 2026-27ನೇ ಶೈಕ್ಷಣಿಕ ಸಾಲಿಗೆ ಪ್ರಥಮ ವರ್ಷದ ಸ್ನಾತಕ ಪದವಿ ಪ್ರೋಗ್ರಾಂಗಳ ಪ್ರವೇಶಾತಿ ಮಾಡಿಕೊಳ್ಳುವಂತೆ ತಿಳಿಸಲಾಗಿತ್ತು. ಇದರ ಮುಂದುವರಿಕೆಯಾಗಿ, ಸ್ನಾತಕ ಪದವಿ ಪ್ರೋಗ್ರಾಂಗಳ ಪ್ರವೇಶಾತಿಗೆ ಈ ಕೆಳಕಂಡಂತೆ ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿದೆ.

| | | |
|---|---|---|
| 01 | ದಂಡಶುಲ್ಕರಹಿತ ಪವೇಶಾತಿ ಕೊನೆಯ ದಿನಾಂಕ | 09-06-2026 |
| 02 | ರೂ.500/- ದಂಡಶುಲ್ಕಸಹಿತ ಪ್ರವೇಶಾತಿ ಕೊನೆಯ ದಿನಾಂಕ | 20-06-2026 |

## ಪ್ರಾಂಶುಪಾಲರುಗಳಿಗೆ/ವಿದ್ಯಾರ್ಥಿಗಳಿಗೆ ಸೂಚನೆಗಳು:-

1. ವಿಶ್ವವಿದ್ಯಾನಿಲಯದ ಘಟಕ/ಸಂಯೋಜಿತ/ಸ್ವಾಯತ್ತ/ಸರ್ಕಾರಿ ಕಾಲೇಜುಗಳಲ್ಲಿ ಪ್ರವೇಶ ಪಡೆಯಲು .ಇಚ್ಛಿಸುವ 10+02 ಅರ್ಹತೆ ಪಡೆದಿರುವ ವಿದ್ಯಾರ್ಥಿಗಳು ಕರ್ನಾಟಕ ರಾಜ್ಯದ ಪಿ.ಯು. ಬೋರ್ಡ್/ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ (KSEAB) ಹೊರತುಪಡಿಸಿ, ಹೊರ ರಾಜ್ಯದ ಮತ್ತು CBSE/ NIOS/ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಈ ಕಛೇರಿ ಸುತ್ತೋಲೆ ಸಂಖ್ಯೆ:ಎಸಿ3/96/2022-23, ದಿನಾಂಕ: 20.05.2023ರಂತೆ ಕ್ರಮವಹಿಸುವುದು ಹಾಗೂ ವಿದೇಶಿ (Foreign National) ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯದಿಂದ ಅರ್ಹತಾ ಪತ್ರ (Eligibility Certificate) ಪಡೆದ ನಂತರ ಪ್ರವೇಶಾತಿ ನೀಡಲು ತಿಳಿಸಿದೆ.
2. ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ವರ್ಗಾವಣೆ ಪ್ರವೇಶಕ್ಕೆ ಅವಕಾಶವಿರುವುದಿಲ್ಲ ಹಾಗೂ ವಿಶ್ವವಿದ್ಯಾನಿಲಯಕ್ಕೆ ನಿಗದಿತ ಶುಲ್ಕ ಪಾವತಿಸದ/ಪೂರ್ಣ ದಾಖಲೆಗಳನ್ನು ಒದಗಿಸದ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ವಿಶ್ವವಿದ್ಯಾನಿಲಯ ಅನುಮೋದಿಸುವುದಿಲ್ಲ.
3. ಪ್ರಥಮ ವರ್ಷಕ್ಕೆ ಪ್ರವೇಶ ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳು ಈ ಮುಂದಿನ ದಾಖಲೆಗಳನ್ನು ಪ್ರವೇಶ ಪಡೆಯುವಂತಹ ಕಾಲೇಜಿಗೆ ಪ್ರವೇಶಾತಿ ಸಮಯದಲ್ಲಿ ಹಾಜರುಪಡಿಸಬೇಕು.

   (ಅ) ದ್ವಿತೀಯ ಪಿ.ಯು.ಸಿ. ಮೂಲ ಅಂಕಪಟ್ಟಿ

   (ಆ) ರಾಜ್ಯ/ಕೇಂದ್ರ/Council of Boards of School Education in India (COBSE) ಇವರಿಂದ ಮಾನ್ಯತೆ/ಸದಸ್ಯತ್ವ ಪಡೆದ ಶಾಲೆ/ಸಂಸ್ಥೆಗಳು ನಡೆಸುವ 10+2 ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಮೂಲ ಅಂಕಪಟ್ಟಿ.
4. ವಿವಿಧ ವಿಶೇಷ ಸವಲತ್ತುಗಳ ಅಡಿಯಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಉದಾ: ಆತ್ಮಹತ್ಯೆ ಮಾಡಿಕೊಂಡಿರುವ ರೈತರ ಮಕ್ಕಳು, ಹೈದ್ರಾಬಾದ್ ಕರ್ನಾಟಕ/ಒಡನಾಡಿ ಸಂಸ್ಥೆ/ Transgender (Third Gender) ಇತ್ಯಾದಿ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯದ ಆದೇಶವನ್ನು ಗಮನಿಸಿ ಪ್ರವೇಶ ನೀಡತಕ್ಕದ್ದು. ಅವಶ್ಯವಿದ್ದಲ್ಲಿ ವಿಶ್ವವಿದ್ಯಾನಿಲಯದಿಂದ ಸ್ಪಷ್ಟೀಕರಣ ಪಡೆದ ನಂತರ ಪ್ರವೇಶಕ್ಕೆ ಪರಿಗಣಿಸುವುದು.

P.T.O

Scanned with OKEN Scanner

5. ಭಾರತ ಸರ್ಕಾರ/ ಕರ್ನಾಟಕ ಸರ್ಕಾರದಿಂದ ವಿದ್ಯಾರ್ಥಿ ವೇತನ ಮಂಜೂರಾತಿಗೆ ಅರ್ಹವಿರುವ ಕಾಲೇಜುಗಳು, ವಿದ್ಯಾರ್ಥಿಗಳ ತಂದೆ-ತಾಯಿ/ಪೋಷಕರ ವಾರ್ಷಿಕ ವರಮಾನ 2.5 ಲಕ್ಷಕ್ಕಿಂತ ಕಡಿಮೆ ಇದ್ದಲ್ಲಿ ಅಥವಾ ಸರ್ಕಾರ ಆಗಿಂದಾಗ್ಗೆ ಹೊರಡಿಸುವ ಆದೇಶಗಳನುಸಾರ ಅಂತಹ SC/ST ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ನೀಡುವುದು. ಶುಲ್ಕ ವಿನಾಯಿತಿ ಪಡೆದ ವಿದ್ಯಾರ್ಥಿಗಳು ಕಡ್ಡಾಯವಾಗಿ ವಿದ್ಯಾರ್ಥಿ ವೇತನಕ್ಕೆ ನಿಗದಿತ ಸಮಯದಲ್ಲಿ ಸಂಬಂಧಿಸಿದ ಇಲಾಖೆಗೆ ಅರ್ಜಿ ಸಲ್ಲಿಸಬೇಕು ಮತ್ತು ಪ್ರಾಂಶುಪಾಲರು ಸಹ ಅರ್ಜಿ ಸಲ್ಲಿಸಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳಬೇಕು.. ವಿದ್ಯಾರ್ಥಿ, ವೇತನ, ಮಂಜೂರಾಗದಂತಹ ಅಥವಾ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದಂತಹ ವಿದ್ಯಾರ್ಥಿಗಳಿಂದ ಪೂರ್ಣ ಪ್ರವೇಶ ಶುಲ್ಕವನ್ನು ಪಾವತಿಸಿಕೊಳ್ಳಬೇಕು. ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಪ್ರವೇಶಾತಿ ಸಂಬಂಧ ಸರ್ಕಾರದ ಆದೇಶಾನುಸಾರ ಕ್ರಮವಹಿಸುವುದು.
6. ಸರ್ಕಾರದಿಂದ ಅನುದಾನ ಪಡೆಯುವ ಕಾಲೇಜುಗಳು, ಸರ್ಕಾರ ಮತ್ತು ವಿಶ್ವವಿದ್ಯಾನಿಲಯ ಆಯಾ ಕೋರ್ಸುಗಳಿಗೆ ನಿಗದಿಪಡಿಸಿರುವ ಶುಲ್ಕಗಳನ್ನು ಮಾತ್ರ ಪಾವತಿಸಿಕೊಳ್ಳಬೇಕು. ಹೆಚ್ಚುವರಿ ಶುಲ್ಕ ಪಡೆಯುವಂತಿಲ್ಲ, ಒಂದು ಪಕ್ಷ ಹೆಚ್ಚುವರಿ ಶುಲ್ಕ ಸಂದಾಯ ಮಾಡಿಕೊಂಡಲ್ಲಿ ಅಂತಹ ಕಾಲೇಜುಗಳ ಮೇಲೆ ಶಿಸ್ತು ಕ್ರಮ ಜರುಗಿಸಬೇಕಾಗುತ್ತದೆ.
7. UGC ಪತ್ರ ಸಂಖ್ಯೆ:F.1-15/2015(ARC) ದಿನಾಂಕ: 18-03-2016ರ ರೀತ್ಯಾ ವಿಶ್ವವಿದ್ಯಾನಿಲಯ ಸಂಯೋಜಿತ ಎಲ್ಲಾ ಪದವಿ ಕಾಲೇಜುಗಳಲ್ಲಿ Anti-Ragging ಘಟಕವನ್ನು ಸ್ಥಾಪಿಸಿರಬೇಕು, ವಿದ್ಯಾರ್ಥಿಗಳು ಯಾವುದೇ ರೀತಿಯಲ್ಲಿ Raggingಗೆ ಒಳಗಾಗದಂತೆ (ಪ್ರಾಂಶುಪಾಲರು/ಮುಖ್ಯಸ್ಥರು ಸಮಿತಿ ವತಿಯಿಂದ) ಎಚ್ಚರವಹಿಸುವುದು.

**<u>ವಿಶೇಷ ಸೂಚನೆ:</u>**

i. ಪ್ರವೇಶಾತಿಯ ಕಡೆಯ ದಿನಾಂಕಗಳು ಮುಗಿದ ನಂತರ, ಯಾವುದೇ ವಿದ್ಯಾರ್ಥಿಗಳ ಮನವಿಗಳನ್ನು ವಿಶ್ವವಿದ್ಯಾನಿಲಯಕ್ಕೆ ರವಾನೆ(Forward) ಮಾಡಬಾರದಾಗಿ ಈ ಮೂಲಕ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿದೆ. ಪ್ರವೇಶ ಪ್ರಕ್ರಿಯೆಗಳನ್ನು ಕಡೆಯ ದಿನಾಂಕದೊಳಗೆ ಕಡ್ಡಾಯವಾಗಿ ಪೂರ್ಣಗೊಳಿಸಬೇಕು.

ii. ಹಳೇ ವಿದ್ಯಾರ್ಥಿಗಳಿಗೆ ವಿಷಮ/ಸಮಚಾತುರ್ಮಾಸಕ್ಕೆ ಮರು ಪ್ರವೇಶ ನೀಡುವ ಮುನ್ನ Regulationಗೆ ಅನುಗುಣವಾಗಿ ವಿಶ್ವವಿದ್ಯಾನಿಲಯದ ಅನುಮತಿಪಡೆಯುವುದು ಕಡ್ಡಾಯವಾಗಿರುತ್ತದೆ. ಒಂದು ಪಕ್ಷ ವಿಶ್ವವಿದ್ಯಾನಿಲಯದ ಅನುಮತಿ ಪಡೆಯದೇ ಪ್ರವೇಶ ಮಾಡಿದ ಪಕ್ಷದಲ್ಲಿ, ಮುಂದಿನ ಎಲ್ಲಾ Litigationಗಳಿಗೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ನೇರ ಹೊಣೆಗಾರರಾಗುತ್ತಾರೆ ಎಂದು ಸ್ಪಷ್ಟಪಡಿಸಿದೆ. ಇಂತಹ ವಿದ್ಯಾರ್ಥಿಗಳ ಮರು ಪ್ರವೇಶಾತಿಯನ್ನು ನಿಗದಿಪಡಿಸಿರುವ ಅಂತಿಮ ದಿನಾಂಕದ ಒಳಗಡೆ ಮಾಡಿಕೊಳ್ಳುವ ಸಂಬಂಧ (ಸಮಚಾತುರ್ಮಾಸದ ಮರುಪ್ರವೇಶಾತಿ ಒಳಗೊಂಡಂತೆ) ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಕ್ರಮವಹಿಸಬೇಕು ಹಾಗೂ ನಿಗದಿತ ದಿನಾಂಕದೊಳಗೆ ಮರುಪ್ರವೇಶಾತಿಯನ್ನು ಅನುಮೋದಿಸಿಕೊಳ್ಳಬೇಕು.

iii. ಕಾಲೇಜು ಅಭಿವೃದ್ಧಿ ಮಂಡಳಿಯಿಂದ ಸಂಯೋಜನೆ ಪಡೆದ ಭಾಷೆಗಳಲ್ಲಿ ಬೋಧಕರು ಲಭ್ಯವಿಲ್ಲದ ಭಾಷಾ ವಿಷಯಗಳಲ್ಲಿ ಮಾತ್ರವೇ ಸ್ವಯಂ ಭಾಷಾ ಕಲಿಕೆಗೆ ವಿದ್ಯಾರ್ಥಿಗಳನ್ನು ಪ್ರವೇಶಾತಿ ಮಾಡಿಕೊಳ್ಳುವುದು.

iv. ವಿದ್ಯಾರ್ಥಿಗಳನ್ನು ಪ್ರವೇಶಾತಿ ಮಾಡುವ ಸಂದರ್ಭದಲ್ಲಿ ಯಾವುದೇ ಗೊಂದಲ ಉಂಟಾದಲ್ಲಿ ಕಾಲೇಜಿಗೆ ಅಗತ್ಯವಾಗಿ ಬೇಕಾದ ಮಾಹಿತಿಯನ್ನು ಸಂಬಂಧಿಸಿದ ಕಾಲೇಜಿನವರೆ ನೇರವಾಗಿ ವಿಶ್ವವಿದ್ಯಾನಿಲಯದಿಂದ ಪಡೆದ ನಂತರವೇ ಪ್ರವೇಶ ನೀಡುವುದು ಹೊರತು ವಿಶ್ವವಿದ್ಯಾನಿಲಯಕ್ಕೆ ವಿದ್ಯಾರ್ಥಿಗಳನ್ನು ಕಳುಹಿಸದಂತೆ ಸೂಚಿಸಲಾಗಿದೆ.

v. ಭಾಷಾ ವಿನಾಯಿತಿ ಕೋರುವ ವಿದ್ಯಾರ್ಥಿಗಳು ಪ್ರಥಮ ವರ್ಷದ ಸೆಮಿಸ್ಟರ್ ಪರೀಕ್ಷೆಗಳು ಪ್ರಾರಂಭವಾಗುವುದಕ್ಕಿಂತ ಕನಿಷ್ಠ ಒಂದು ತಿಂಗಳು ಮುಂಚಿತವಾಗಿ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಭಾಷಾ ವಿನಾಯತಿ ಪಡೆಯಲು ತಿಳಿಸಿದೆ. ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

P.T.O

Scanned with OKEN Scanner

vi. ಎರಡು ಮತ್ತು ಮೂರನೇ ವರ್ಷಕ್ಕೆ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದ ನಂತರವೇ ಹಾಜರಾತಿ ಪುಸ್ತಕದಲ್ಲಿ ಹೆಸರು ನಮೂದಿಸುವುದು.

vii. ಕರ್ನಾಟಕ ಸರ್ಕಾರದ ಪಿ.ಯು. ಮಂಡಳಿ/ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯಿಂದ (KSEAB) ನೇರವಾಗಿ ಪರೀಕ್ಷೆ ಬರೆದು ಉತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯದಿಂದ ಯಾವುದೇ ರೀತಿಯ ಪ್ರಮಾಣ ಪತ್ರಗಳ ಅವಶ್ಯಕತೆ ಇಲ್ಲದೆ ನೇರವಾಗಿ ಪ್ರವೇಶಾತಿ ಮಾಡಿಕೊಳ್ಳಬಹುದಾಗಿದೆ.

ಕುಲಸಚಿವರಿಂದ ಕರಡು ಅನುಮೋದಿಸಿದೆ

ಉಪಕುಲಸಚಿವರು(ಶೈಕ್ಷಣಿಕ)

ಉಪಕುಲಸಚಿವರು (ಶೈಕ್ಷಣಿಕ),
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

ಇವರಿಗೆ;

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು–ಮಾಹಿತಿಗಾಗಿ.
4. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ನಿರ್ದೇಶಕರು, ಪಿ.ಎಂ.ಇ.ಬಿ., ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
6. ನಿರ್ದೇಶಕರು, ವಿಶ್ವವಿದ್ಯಾನಿಲಯ ಕಾನೂನು ಶಾಲೆ, ಮಾನಸಗಂಗೋತ್ರಿ, ಮೈಸೂರು.
7. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೌಲ್ಯ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಸಂಯೋಜಕರು, ಐಸಿಡಿ, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ವಿ.ವಿ. ಈ ಅಧಿಸೂಚನೆಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕಾಗಿ ಕೋರಿದೆ.
9. ಆಡಳಿತ/ಪರೀಕ್ಷಾ/ಶೈಕ್ಷಣಿಕ/ ವಿಭಾಗದ ಎಲ್ಲಾ ಉಪಕುಲಸಚಿವ/ಸಹಾಯಕ ಕುಲಸಚಿವ/ಅಧೀಕ್ಷಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
10. ಉಪಕುಲಸಚಿವ/ಅಧೀಕ್ಷಕರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿಶೇಷ ಘಟಕ, ಮಹಾರಾಜ ಕಾಲೇಜು ಶತಮಾನೋತ್ಸವ ಭವನ ಕಟ್ಟಡ, ಮೈವಿವಿ, ಮೈಸೂರು.
11. ಆಡಳಿತ ಶಾಖೆ ಶೈಕ್ಷಣಿಕ ವಿಭಾಗದ ಎಲ್ಲಾ ವಿಷಯ ನಿರ್ವಾಹಕರುಗಳಿಗೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಮಾನ್ಯ ಕುಲಪತಿ/ ಕುಲಸಚಿವ/ ಕುಲಸಚಿವ(ಪರೀಕ್ಷಾಂಗ)/ ಹಣಕಾಸು ಅಧಿಕಾರಿಗಳು ಇವರ ಆಪ್ತ ಸಹಾಯಕರುಗಳು, ಮೈವಿವಿ, ಮೈಸೂರು.
13. ಕಛೇರಿ ಪ್ರತಿ.

Scanned with OKEN Scanner